ಮೂರನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ,,
ಕನಕಪುರ

ಸಿ.ಸಿ ನಂ. **303/2013**

| **ಚಾಸಾ ಃ** | **7** | **ಪ್ರಾಸಾಃ-** | **4** |
|---|---|---|---|
| ಹೆಸರು | ಹೊನ್ನಮ್ಮ | | |
| ಗಂಡನ ಹೆಸರು | ಶಿವಲಿಂಗಯ್ಯ | | |
| ವಯಸ್ಸು | 52 | | |
| ಉದ್ಯೋಗ | ವ್ಯವಸಾಯ | | |
| ವಿಳಾಸ | ಕಬ್ಬಾಳು ಗ್ರಾಮ | | |

- - - - - - - - - - - - - - - - - - - - - - - - - - - - - - -

**ದಿಃ24.01.2025ರಂದು ಸಾಕ್ಷಿಗೆ ಪ್ರಮಾಣ ವಚನ ಬೋದಿಸಲಾಯಿತು.**

ಮುಖ್ಯವಿಚಾರಣೆ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-

ನ್ಯಾಯಾಲಯದ ಮುಂದಿರುವ ೩ನೇ ಆರೋಪಿತನ ಪರಿಚಯವಿದೆ. ನ್ಯಾಯಾಲಯದ ಮುಂದೆ ೧ ಮತ್ತು ೨ನೇ ಆರೋಪಿತರು ಗೈರು ಹಾಜರಾಗಿದ್ದು, ಆರೋಪಿ ಪರ ವಕೀಲರು ಆರೋತಪಿತರ ಗುರುತಿಸುವಿಕೆಯ ಬಗ್ಗೆ ಯಾವುದೇ ತಕರಾರು ಇಲ್ಲ ಎಂದು ನುಡಿದಿರುತ್ತಾರೆ.

ಚಾಸಾ-೧ ನನ್ನ ಸಂಬಂಧಿಕರು, ಚಾಸಾ-೨ ರಿಂದ ೬ ನಮ್ಮ ಊರಿನವರು. ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

ಆರೋಪಿತರ ಮತ್ತು ಚಾಸಾ-೧ ರವರ ನಡುವೆ ಆದಂತಹ ಗಲಾಟೆಯನ್ನು ನಾನು ನೋಡಿರುವುದಿಲ್ಲ ಹಾಗೂ ನಾನು ಯಾವುದೇ ಜಗಳವನ್ನು ಬಿಡಿಸಿರುವುದಿಲ್ಲ.

ಪೊಲೀಸರು ನನ್ನನ್ನು ವಿಚಾರಣೆ ಮಾಡಿಲ್ಲ. ಅವರಿಗೆ ನಾನು ಹೇಳಿಕೆಯನ್ನು ನೀಡಿಲ್ಲ.

ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಸರ್ಕಾರಿ ಅಭಿಯೋಜಕರು ರವರು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.

ಪಾಟೀ ಸವಾಲು ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-

ದಿನಾಂಕ.**14.11.2012** ರಂದು ಪೋಲೀಸರಿಗೆ ಹೇಳಿಕೆ ನೀಡಿದ್ದೇನೆಂದರೆ ಸರಿಯಲ್ಲ. ಸಾಕ್ಷಿಗೆ ತನ್ನ ಹೇಳಿಕೆಯನ್ನು ಓದಿ ಹೇಳಿದ್ದು, ಸಾಕ್ಷಿಯು ತನ್ನ ಹೇಳಿಕೆಯನ್ನು ತಿರಸ್ಕರಿಸಿದ್ದರಿಂದ ಅದನ್ನು ನಿಪಿ-**05** ಎಂದು ಗುರುತಿಸಲಾಯಿತು.

ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ-

ಆರೋಪಿ ಪರ ವಕೀಲರು ತಮ್ಮ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆ ಃಇಲ್ಲ**

**(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ದೃಡಿಕರೀಸುತ್ತೇನೆ.)**

**ಓ ಹೇ ಕೇ ಸರಿ ಇದೆ,**

**ಮೂರನೇ ಅಪರ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್ ಸಿ., ಕನಕಪುರ**